# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 08-11-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀಮತಿ ಶಾಂತ.ಬಿ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶಾಹೀನಾ ಬೇಗಂ, ವೈದ್ಯಾಧಿಕಾರಿಯವರ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)
5. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರವಿ, ಕಂದಾಯ ನಿರೀಕ್ಷಕರು,
2. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
3. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
4. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
5. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
6. ಸಂಗೀತಾ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ
7. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,
8. ಶ್ರೀ ವಿಕ್ರಾಂತ್, ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಘನತ್ಯಾಜ್ಯ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

2) **ಬೀದಿ ದೀಪಗಳ ನಿರ್ವಹಣೆ:-**

- ಬೀದಿ ದೀಪಗಳ ನಿರ್ವಹಣೆ ಬಗ್ಗೆ ಶ್ರೀ ಪಿಳ್ಳಪ್ಪ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಐ ಮಸ್ತ್ ದೀಪ ಹಾಗೂ ಟೈಮರ್‌ಗಳನ್ನು ದುರಸ್ತಿಪಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ವಿಭಾಗದ ಅಭಿಯಂತರರು ಕೂಡಲೇ ದುರಸ್ತಿಪಡಿಸಲು ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

3) **ಬೃಹತ್ ನೀರುಗಾಲುವೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

4) **ಆರೋಗ್ಯ ಇಲಾಖೆ:-**

- ಆರೋಗ್ಯ ವೈದ್ಯಾಧಿಕಾರಿಗಳು ಮಾತನಾಡಿ ಎಲ್ಲಾ ಕೋವಿಡ್ ಸಂಬಂಧಿಸಿದ ಎಲ್ಲಾ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿದ್ದು, ವ್ಯಾಕ್ಸಿನೇಷನ್, ಬೂಸ್ಟರ್ ವ್ಯಾಕ್ಸಿನೇಷನ್ ಮಾಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

5) **ಕಾಮಗಾರಿ ಇಲಾಖೆ:-**

- **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯ 2ನೇ ಎ ಕ್ರಾಸ್ ಹಾಗೂ ಮತ್ತು 2ನೇ ಕ್ರಾಸ್ ರಸ್ತೆಗಳ ಚರಂಡಿಗಳಲ್ಲಿ ಡಿ ಸಿಲ್ಟಿಂಗ್ ಮಾಡಬೇಕಾಗಿದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಮಾತನಾಡಿ, ಚರಂಡಿಗಳಲ್ಲಿ ಡಿ ಶಿಲ್ಟ್ ಮಾಡಲು ಕ್ರಮ ವಹಿಸುವುದಾಗಿ ತಿಳಿಸಿದರು.

6) **ಕಂದಾಯ ಇಲಾಖೆ:-**

- **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಮತದಾರರ ಪಟ್ಟಿಯ ಗುರುತಿನ ಚೀಟಿಗೆ ಆದಾರ್ ಕಾರ್ಡ್ ಲಿಂಕ್ ಮಾಡುವ ಬಗ್ಗೆ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಮಾತನಾಡಿ, ಈ ಬಗ್ಗೆ ಈಗಾಗಲೇ ಜನ ಜಾಗೃತಿಗೊಳಿಸಿ, ಕ್ರಮ ವಹಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

7) **ಉದ್ಯಾನವನಗಳ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

8) **ಅರಣ್ಯ ವಿಭಾಗ:-**

- ರಾಮಯ್ಯ ಬಡಾವಣೆಯ ಶ್ರೀ ಪಿಳ್ಳಪ್ಪ ರವರು ಮಾತನಾಡಿ ರಾಮಯ್ಯ ಬಡಾವಣೆ ಪ್ರದೇಶದಲ್ಲಿ ಮರಗಳ ಕೊಂಬೆಗಳನ್ನು ತೆರವುಗೊಳಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಮುಂದಿನ ಸಭೆಗೆ ಅರಣ್ಯ ವಿಭಾಗದವರನ್ನು ಆಹ್ವಾನಿಸಿ, ಕೊಂಬೆಗಳನ್ನು ತೆರವುಗೊಳಿಸಲು ಕ್ರಮ ವಹಿಸಲು ಆದೇಶಿಸಿದರು.

9) **ಪಶುಸಂಗೋಪನೆ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

10) **ನೀರು ಸರಬರಾಜು:-** ಯಾವುದೇ ಸಮಸ್ಯೆ ಇರುವುದಿಲ್ಲ.

11) **ಪೋಲೀಸ್/ಸಂಚಾರ ಮತ್ತು ಕಾನೂನು ಸುವ್ಯವಸ್ಥೆ:-**

- ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ) ರವರು ಮಾತನಾಡಿ, ಸುಖ್‌ಸಾಗರ್ ರಸ್ತೆಯಲ್ಲಿ ಒಂದು ದಿನ ಒಂದು ಕಡೆ ವಾಹನ ನಿಲುಗಡೆ ಮಾಡಲು ಕ್ರಮ ವಹಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೋಲೀಸ್ ಅಧಿಕಾರಿಗಳು ಮಾತನಾಡಿ, ಈ ಬಗ್ಗೆ ಈಗಾಗಲೇ ಕ್ರಮ ವಹಿಸಲಾಗಿದ್ದು, ಮತ್ತಷ್ಟು ನಿಗಾ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

12) <u>ಬೆಸ್ಕಾಂ ಇಲಾಖೆ :-</u> ಯಾವುದೇ ಸಮಸ್ಯೆ ಇರುವುದಿಲ್ಲ.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**<u>ಪ್ರತಿಯನ್ನು:-</u>**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.